# ಬಿಐಇಟಿ ವಿದ್ಯಾರ್ಥಿಗಳ ಪ್ರಾಜೆಕ್ಟ್‌ಗಳಿಗೆ 'ಅತ್ಯುತ್ತಮ ಪ್ರಾಜೆಕ್ಟ್' ಪ್ರಶಸ್ತಿ

ದಾವಣಗೆರೆ, ಅ.20- ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸಲ್ಲಿಸಿದ 3 ಪ್ರಾಜೆಕ್ಟ್‌ಗಳಿಗೆ ಕೆ.ಎಸ್.ಸಿ.ಎಸ್.ಟಿ. ವರ್ಷದ ಅತ್ಯುತ್ತಮ ಪ್ರಾಜೆಕ್ಟ್ ಎಂಬ ಬಹುಮಾನ ದೊರೆತಿದೆ.

ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಪ್ರತಿವರ್ಷ ತಾಂತ್ರಿಕ ವಿದ್ಯಾರ್ಥಿಗಳು ಕೈಗೊಳ್ಳುವ ಉತ್ತಮ ಪ್ರಾಜೆಕ್ಟ್‌ಗಳಿಗೆ ಪ್ರಾಯೋಜಕತ್ವ ನೀಡಿ ಧನ ಸಹಾಯವನ್ನು ಒದಗಿಸಿ, ಶೈಕ್ಷಣಿಕ ವರ್ಷದ ಕೊನೆಯಲ್ಲಿ ರಾಜ್ಯದಾದ್ಯಂತ ಆಯ್ಕೆಯಾಗುವ ಎಲ್ಲಾ ಪ್ರಾಜೆಕ್ಟ್‌ಗಳ ಪ್ರದರ್ಶನ ಏರ್ಪಡಿಸುತ್ತದೆ.

ಪ್ರಸ್ತುತ ವರ್ಷ ಬಿ.ಐ.ಇ.ಟಿ. ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿಗಳು ಸಲ್ಲಿಸಿದ 24 ಪ್ರಾಜೆಕ್ಟ್‌ಗಳು ಉತ್ತಮವೆಂದು ಪರಿಗಣಿಸಲ್ಪಟ್ಟು ಹಣಕಾಸಿನ ನೆರವಿಗೆ ಆಯ್ಕೆಯಾಗಿದ್ದವು. ಇದರಲ್ಲಿ ಮೂರು ಪ್ರಾಜೆಕ್ಟ್‌ಗಳಿಗೆ 'ವರ್ಷದ ಅತ್ಯುತ್ತಮ ಪ್ರಾಜೆಕ್ಟ್' ಬಹುಮಾನ ದೊರೆತಿದೆ ಎಂದು ಪ್ರಾಂಶುಪಾಲ ಡಾ. ಎಚ್.ಜಿ. ಅರವಿಂದ್ ತಿಳಿಸಿದ್ದಾರೆ.

# ಬಿಐಇಟಿ ವಿದ್ಯಾರ್ಥಿಗಳ ಪ್ರಾಜೆಕ್ಟ್‌ಗಳಿಗೆ 'ಅತ್ಯುತ್ತಮ ಪ್ರಾಜೆಕ್ಟ್' ಪ್ರಶಸ್ತಿ

ದಾವಣಗೆರೆ, ಅ.20- ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸಲ್ಲಿಸಿದ 3 ಪ್ರಾಜೆಕ್ಟ್‌ಗಳಿಗೆ ಕೆ.ಎಸ್.ಸಿ.ಎಸ್.ಟಿ. ವರ್ಷದ ಅತ್ಯುತ್ತಮ ಪ್ರಾಜೆಕ್ಟ್ ಎಂಬ ಬಹುಮಾನ ದೊರೆತಿದೆ.

ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಪ್ರತಿವರ್ಷ ತಾಂತ್ರಿಕ ವಿದ್ಯಾರ್ಥಿಗಳು ಕೈಗೊಳ್ಳುವ ಉತ್ತಮ ಪ್ರಾಜೆಕ್ಟ್‌ಗಳಿಗೆ ಪ್ರಾಯೋಜಕತ್ವ ನೀಡಿ ಧನ ಸಹಾಯವನ್ನು ಒದಗಿಸಿ, ಶೈಕ್ಷಣಿಕ ವರ್ಷದ ಕೊನೆಯಲ್ಲಿ ರಾಜ್ಯದಾದ್ಯಂತ ಆಯ್ಕೆಯಾಗುವ ಎಲ್ಲಾ ಪ್ರಾಜೆಕ್ಟ್‌ಗಳ ಪ್ರದರ್ಶನ ಏರ್ಪಡಿಸುತ್ತದೆ.

ಪ್ರಸ್ತುತ ವರ್ಷ ಬಿ.ಐ.ಇ.ಟಿ. ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿಗಳು ಸಲ್ಲಿಸಿದ 24 ಪ್ರಾಜೆಕ್ಟ್‌ಗಳು ಉತ್ತಮವೆಂದು ಪರಿಗಣಿಸಲ್ಪಟ್ಟು ಹಣಕಾಸಿನ ನೆರವಿಗೆ ಆಯ್ಕೆಯಾಗಿದ್ದವು. ಇದರಲ್ಲಿ ಮೂರು ಪ್ರಾಜೆಕ್ಟ್‌ಗಳಿಗೆ 'ವರ್ಷದ ಅತ್ಯುತ್ತಮ ಪ್ರಾಜೆಕ್ಟ್' ಬಹುಮಾನ ದೊರೆತಿದೆ ಎಂದು ಪ್ರಾಂಶುಪಾಲ ಡಾ. ಎಚ್.ಜಿ. ಅರವಿಂದ್ ತಿಳಿಸಿದ್ದಾರೆ.